## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳ ಆಸ್ತಿ ತೆರಿಗೆ ಪಾವತಿಯಲ್ಲಿ ಶೇ 50ರಷ್ಟು ರಿಯಾಯಿತಿಯನ್ನು ನೀಡುವ ಬಗ್ಗೆ.

**ಓದಲಾಗಿದೆ :**

1. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ರವರ ಏಕ ಕಡತ ಸಂಖ್ಯೆ: ಪ್ರಇ / ಆಡಳಿತ-1 / 02 / 2021-22, ದಿನಾಂಕ:16.06.2021.
2. ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ರವರ ಏಕ ಕಡತ ಸಂಖ್ಯೆ: TOR/ 23/ TDS/2021, ದಿನಾಂಕ:27.07.2021.
3. ಸರ್ಕಾರದ ಆದೇಶ ಸಂಖ್ಯೆ: UDD 139 GEL 2021, ದಿನಾಂಕ: 06.11.2021.
4. ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ರವರ ಏಕ ಕಡತ ಸಂಖ್ಯೆ: TOR/ 23/ TDS/2021, ದಿನಾಂಕ:09.11.2021.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕರ ಏಕ ಕಡತದಲ್ಲಿ, COVID-19ರ ಎರಡೂ ಅಲೆಗಳಿಂದಾಗಿ ಪ್ರವಾಸೋದ್ಯಮ ಉದ್ಯಮದಲ್ಲಿ ಉಂಟಾಗಿರುವ ಸಂಕಷ್ಟದಿಂದಾಗಿ, ಕರ್ನಾಟಕ ಟೂರಿಸಂ ಸೊಸೈಟಿಯವರು ಪ್ರವಾಸೋದ್ಯಮದ ಚಾಲನೆಗಾಗಿ ಪುನರುಜ್ಜೀವನ ಪ್ಯಾಕೇಜ್‌ಗಳ ಪಟ್ಟಿಯನ್ನು ಸಲ್ಲಿಸಿದ್ದು, ಸೊಸೈಟಿಯ ಬೇಡಿಕೆಗಳು ಈ ಕೆಳಕಂಡಂತಿರುತ್ತದೆ ಎಂದು ತಿಳಿಸಿರುತ್ತಾರೆ.

(1) 2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್,/ ರೆಸಾರ್ಟ್/ ಅಮ್ಯೂಸ್ ಮೆಂಟ್ ಪಾರ್ಕ್ ಗಳ ಮೇಲಿನ ಆಸ್ತಿ ತೆರಿಗೆ ಪಾವತಿಸುವುದನ್ನು ಮನ್ನಾ ಮಾಡುವುದು.

(2) ಅಬಕಾರಿ ಪರವಾನಗಿ ಶುಲ್ಕದ ಪಾವತಿ ಮನ್ನಾ / ಮುಂದೂಡಿಕೆ.

(3) ವಿದ್ಯುತ್ ಬಿಲ್ ಗಳಲ್ಲಿ ರಿಯಾಯಿತಿ / ಮನ್ನಾ: ಬೇಡಿಕೆ ಶುಲ್ಕ ಮನ್ನಾ.

(4) ವಾಹನ ತ್ರೈಮಾಸಿಕ ರಸ್ತೆ ತೆರಿಗೆಯನ್ನು 6 ತಿಂಗಳವರೆಗೆ ಪಾವತಿಸುವುದರಿಂದ ರಿಯಾಯಿತಿ,

...2.

Scanned with CamScanner

(5) ಪ್ರವಾಸೋದ್ಯಮ ಕ್ಷೇತ್ರದಲ್ಲಿ ಅಸಂಘಟಿತ ಉದ್ಯೋಗಿಗಳಿಗೆ ಪ್ಯಾಕೇಜ್.

(6) ಪ್ರವಾಸೋದ್ಯಮ ವ್ಯಾಪಾರ ವಿಭಾಗಗಳಿಗೆ ಸಾಲ / ಪ್ರವಾಸೋದ್ಯಮ ವ್ಯಾಪಾರ ವರ್ಗಗಳಿಗೆ ಡಬ್ಲ್ಯೂಸಿ ಬೆಂಬಲ.

ಈ ಹಿನ್ನಲೆಯಲ್ಲಿ, ದಿನಾಂಕ:16.06.2021 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮೇಲ್ಕಂಡ ಬೇಡಿಕೆಗಳ ಮತ್ತು ಅವುಗಳ ಆರ್ಥಿಕ ಪರಿಣಾಮಗಳ ಕುರಿತು ಚರ್ಚಿಸಲಾಗಿದ್ದು, ಕ್ರಮ ಸಂಖ್ಯೆ 2 ಮತ್ತು 4 ರಲ್ಲಿನ ಬೇಡಿಕೆಗಳನ್ನು ಈಗಾಗಲೇ ಆರ್ಥಿಕ ಇಲಾಖೆಯು ಪರಿಗಣಿಸಿದ್ದು, ಕ್ರಮ ಸಂಖ್ಯೆ 4 ಕ್ಕೆ ಸಂಬಂಧಿಸಿದಂತೆ ಮೋಟಾರ್ ಕ್ಯಾಬ್ ಮತ್ತು ಮ್ಯಾಕ್ಸಿ ಕ್ಯಾಬ್ ಗಳನ್ನೊಳಗೊಂಡಂತೆ ಮನ್ನಾ ಪ್ರಸ್ತಾವನೆಯನ್ನು ಸಾರಿಗೆ ಇಲಾಖೆಗೆ ಅನಧಿಕೃತ ಟಿಪ್ಪಣಿಯ ಮೂಲಕ ಕಳುಹಿಸುವಂತೆ ಸೂಚಿಸಿರುತ್ತಾರೆ. ಇನ್ನುಳಿದ ಬೇಡಿಕೆಗಳಲ್ಲಿ ಈ ಕೆಳಕಂಡ ಬೇಡಿಕೆಗಳ ಕುರಿತಂತೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಪ್ರವಾಸೋದ್ಯಮ ನಿರ್ದೇಶಕರು ಕೋರಿರುತ್ತಾರೆ.

(1) 2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್/ ರೆಸಾರ್ಟ್/ ಅಮ್ಯೂಸ್ ಮೆಂಟ್ ಪಾರ್ಕ್ ಗಳ ಮೇಲಿನ ಆಸ್ತಿ ತೆರಿಗೆ ಪಾವತಿಸುವುದನ್ನು ಮನ್ನಾ ಮಾಡುವುದು.

(2) ವಿದ್ಯುತ್ ಬಿಲ್ ಗಳಲ್ಲಿ ರಿಯಾಯಿತಿ / ಮನ್ನಾ: ಬೇಡಿಕೆ ಶುಲ್ಕ ಮನ್ನಾ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ರವರು, ದಿನಾಂಕ:24.06.2021 ರಂದು ನಡೆದ ಸಭೆಯ ತೀರ್ಮಾನದಂತೆ ಹಾಗೂ ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯಂತೆ 2021-22ನೇ ಹಣಕಾಸು ವರ್ಷದಲ್ಲಿ ಶೇ.50 ರಷ್ಟು ಆಸ್ತಿ ತೆರಿಗೆಯಲ್ಲಿ ಹೋಟೆಲ್/ ರೆಸಾರ್ಟ್/ ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳಿಗೆ ರಿಯಾಯಿತಿ ನೀಡುವ ಸಂಬಂಧ ವಿಧಾನಗಳನ್ನು / ಮಾರ್ಗಸೂಚಿಗಳನ್ನು ರೂಪಿಸಲು ಏಕ ಕಡತದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಈ ಬಗ್ಗೆ ಪರಿಶೀಲಿಸಿ, ಸರ್ಕಾರದ ಅಧೀನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ, 2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳ ಆಸ್ತಿ ತೆರಿಗೆ ಪಾವತಿಯಲ್ಲಿ, ಬಿಬಿಎಂಪಿಯನ್ನು ಹೊರತುಪಡಿಸಿ ಕೆಲವೊಂದು ಷರತ್ತಿಗೊಳಪಟ್ಟು, ಶೇ 50 ರಷ್ಟು ರಿಯಾಯಿತಿಯನ್ನು ನೀಡಿ ಆದೇಶಿಸಿರುತ್ತಾರೆ.

...3.

Scanned with CamScanner

ಮೇಲೆ ಕ್ರಮ ಸಂಖ್ಯೆ: (4) ರಲ್ಲಿ ಓದಲಾದ ಕಡತದಲ್ಲಿ, ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ಇವರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಆದೇಶದಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರು 2021-22ನೇ ಹಣಕಾಸು ವರ್ಷದಲ್ಲಿ ಬಿಬಿಎಂಪಿ ಯನ್ನು ಹೊರತುಪಡಿಸಿ ಉಳಿದ ನಗರಾಭಿವೃದ್ಧಿ ಇಲಾಖೆಯ ವ್ಯಾಪ್ತಿಯ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳ ಆಸ್ತಿ ತೆರಿಗೆ ಪಾವತಿಯಲ್ಲಿ ಶೇ. 50 % ರಷ್ಟು ರಿಯಾಯಿತಿ ನೀಡಿರುವಂತೆ ಬಿಬಿಎಂಪಿ ಯನ್ನು ಒಳಗೊಂಡಂತೆ, ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳ ಆಸ್ತಿ ತೆರಿಗೆಯಲ್ಲಿ ಶೇ. 50 % ರಷ್ಟು ರಿಯಾಯಿತಿ ನೀಡುವ ಸಂಬಂಧ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಈ ಹಿನ್ನಲೆಯಲ್ಲಿ, ಬಿಬಿಎಂಪಿ ವ್ಯಾಪ್ತಿಗೆ ಸಂಬಂಧಿಸಿದಂತೆ, 2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳ ಆಸ್ತಿ ತೆರಿಗೆ ಪಾವತಿಯಲ್ಲಿ, ಶೇ 50 % ರಷ್ಟು ರಿಯಾಯಿತಿಯನ್ನು ನೀಡುವ ಸಂಬಂಧ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ನಅಇ 368 ಎಂಎನ್ ಯು 2021</u>**
**<u>ಬೆಂಗಳೂರು, ದಿನಾಂಕ: 24-11-2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ, 2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳು ಪಾವತಿಸುವ ಆಸ್ತಿ ತೆರಿಗೆಯಿಂದ ಶೇ.50 ರಷ್ಟು ರಿಯಾಯಿತಿಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಿ ಆದೇಶಿಸಿದೆ.

(I) "The Government agrees to give additionality to compensate for the losses due to waiving off 50% of the property tax in ULBs. This additionality would be given after this waiver is reflected in the DCB records of ULBs."

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ, 2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳ ಆಸ್ತಿ ತೆರಿಗೆಯಿಂದ ಶೇ 50ರಷ್ಟು ರಿಯಾಯಿತಿಯನ್ನು ನೀಡಲು ಅನುಸರಿಸಬೇಕಾದ ಕ್ರಮಗಳು ಈ ಕೆಳಕಂಡಂತಿವೆ:

1. ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳ ಮಾಲೀಕರು ಶೇಕಡಾ 50 ರಷ್ಟು ಆಸ್ತಿ ತೆರಿಗೆಯನ್ನು ಪಾವತಿಸುವುದು ಹಾಗೂ ಶೇ. 50 ರಷ್ಟು ಆಸ್ತಿ ತೆರಿಗೆಯಿಂದ ರಿಯಾಯಿತಿಯನ್ನು ನೀಡಲು ಈ ಆದೇಶದ ಅನುಬಂಧದಲ್ಲಿ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಅರ್ಜಿಯನ್ನು ಸಲ್ಲಿಸತಕ್ಕದ್ದು.

..4.

Scanned with CamScanner

2. ಸದರಿ ಅರ್ಜಿಗಳನ್ನು ವರ್ಗವಾರು ಕಂದಾಯ ನಿರೀಕ್ಷಕರಿಂದ ಪರಿಶೀಲನೆಗೊಳಪಡಿಸತಕ್ಕದ್ದು.

3. ಸದರಿ ರಿಯಾಯಿತಿ ನೀಡಲು ಸಲ್ಲಿಸಿದ ವಿವರವಾದ ವರದಿಯನ್ನು ವಿಶೇಷ ಆಯುಕ್ತರು (ಕಂದಾಯ), ಬಿಬಿಎಂಪಿ ರವರು ಪರಿಶೀಲಿಸತಕ್ಕದ್ದು.

4. ಸದರಿ ಅರ್ಜಿಗಳನ್ನು ವರ್ಗವಾರು ಬಿಬಿಎಂಪಿ ವ್ಯಾಪ್ತಿಯಲ್ಲಿನ ಸಮಿತಿಯಿಂದ ಪರಿಶೀಲನೆಗೊಳಪಡಿಸತಕ್ಕದ್ದು.

5. ಬಿಬಿಎಂಪಿ ವ್ಯಾಪ್ತಿಯಲ್ಲಿನ ಸಮಿತಿಯು ಸದರಿ ಕ್ಲೇಮ್ / ಬಿಲ್ಲುಗಳನ್ನು ಸಂಬಂಧಪಟ್ಟ ಇಲಾಖೆಗೆ ಸಲ್ಲಿಸುವುದು.

6. ಆಸ್ತಿ ತೆರಿಗೆಯಲ್ಲಿ ನೀಡಿರುವ ರಿಯಾಯಿತಿ ಮೊತ್ತವನ್ನು ಸರ್ಕಾರದಿಂದ ಹಿಂಭರಿಸಲು ಆರ್ಥಿಕ ಇಲಾಖೆಗೆ ಸಲ್ಲಿಸುವುದು.

7. ಶೇ.50 ರಷ್ಟು ಆಸ್ತಿ ತೆರಿಗೆಯಿಂದ ರಿಯಾಯಿತಿಯನ್ನು ಪಡೆಯಲಿಚ್ಛಿಸುವ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ರವರು ಕೆ.ಟಿ.ಟಿ.ಎಫ್. ಕಾಯ್ದೆ 8/1ರ ಅನ್ವಯ ಪ್ರವಾಸೋದ್ಯಮ ಇಲಾಖೆಯಲ್ಲಿ ನೋಂದಾಯಿಸತಕ್ಕದ್ದು. ಈ ಸಂಬಂಧ ವೆಬ್ ಸೈಟ್ ನಲ್ಲಿ ನೋಂದಣಿಯಾದ ಸದಸ್ಯರಿಗೆ ಸದರಿ ರಿಯಾಯಿತಿಯನ್ನು ನೀಡುವುದು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ, 2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಪಾರ್ಕ್ ಗಳ ಆಸ್ತಿ ತೆರಿಗೆ ಪಾವತಿಯಲ್ಲಿ ಶೇ 50ರಷ್ಟು ರಿಯಾಯಿತಿ ಸವಲತ್ತನ್ನು ಪ್ರವಾಸೋದ್ಯಮ ವಲಯಕ್ಕೆ ತಲುಪಿಸಲು ಬಿಬಿಎಂಪಿ ವ್ಯಾಪ್ತಿಯಲ್ಲಿ ಕೆಳಕಂಡ ಸಮಿತಿಯನ್ನು ರಚಿಸಿದೆ. ಸದರಿ ಸಮಿತಿಯು ಅನುಷ್ಠಾನ ಪರಿವೀಕ್ಷಣೆ ಮತ್ತು ಮೇಲ್ವಿಚಾರಣೆ ನಡೆಸತಕ್ಕದ್ದು.

<u>**ಬಿಬಿಎಂಪಿ ವ್ಯಾಪ್ತಿಯಲ್ಲಿನ ಸಮಿತಿ:**</u>

(1) ವಿಶೇಷ ಆಯುಕ್ತರು (ಹಣಕಾಸು), ಬಿಬಿಎಂಪಿ – ಅಧ್ಯಕ್ಷರು
(2) ವಿಶೇಷ ಆಯುಕ್ತರು (ಕಂದಾಯ), ಬಿಬಿಎಂಪಿ - ಸದಸ್ಯರು
(3) ನಿರ್ದೇಶಕರು (ಹಣಕಾಸು), ಬೆಸ್ಕಾಂ– ಸದಸ್ಯರು
(4) ಕಾರ್ಯದರ್ಶಿ, ಕರ್ನಾಟಕ ಟೂರಿಸಂ ಸೊಸೈಟಿ- ಸದಸ್ಯರು
(5) ಉಪ ಆಯುಕ್ತರು, ಸಂಬಂಧ ಪಟ್ಟ ವಲಯಗಳು - ಕಾರ್ಯದರ್ಶಿ

...5.

Scanned with CamScanner

ಸದರಿ ಆದೇಶವನ್ನು ಆರ್ಥಿಕ ಇಲಾಖೆಯು ಹಿಂಬರಹ ಸಂಖ್ಯೆ: ಆಇ 416 ವೆಚ್ಚ-7/ 2021, ದಿನಾಂಕ: 23-06-2021 ಮತ್ತು ಆಇ 480 ವೆಚ್ಚ/9 / 2020-21, ದಿನಾಂಕ: 03.09.2021 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲಕ್ಷ್ಮೀಸಾಗರ್ ಎನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ (ಬಿಬಿಎಂಪಿ)

**ಇವರಿಗೆ,**

1. ಮಹಾಲೇಖಪಾಲರು (ಲೆಕ್ಕಪತ್ರ /ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂದನ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ.ಗೋಪುರ, ಬೆಂಗಳೂರು.
5. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು.
6. ವಿಶೇಷ ಆಯುಕ್ತರು (ಹಣಕಾಸು), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ವಿಶೇಷ ಆಯುಕ್ತರು (ಕಂದಾಯ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ನಿರ್ದೇಶಕರು (ಹಣಕಾಸು), ಬೆಸ್ಕಾಂ, ಕೆ.ಆರ್ ವೃತ್ತ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ಟೂರಿಸಂ ಸೊಸೈಟಿ, ಬೆಂಗಳೂರು.
10. ಉಪ ಆಯುಕ್ತರು, ಸಂಬಂಧ ಪಟ್ಟ ವಲಯಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು
3) ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ, ವಿಕಾಸಸೌಧ, ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ (ಪೌರಾಡಳಿತ & ಅಭಿವೃದ್ಧಿ ಪ್ರಾಧಿಕಾರಗಳು), ವಿಕಾಸಸೌಧ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ-1, 2, 3 & 4, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.

Scanned with CamScanner

# ಅನುಬಂಧ

2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಉದ್ಯಾನವನಗಳ ಆಸ್ತಿ ತೆರಿಗೆಯಿಂದ ಶೇ 50ರಷ್ಟು ರಿಯಾಯಿತಿಯನ್ನು ಪಡೆಯಲು ಸಲ್ಲಿಸಬೇಕಾದ ಅರ್ಜಿ ನಮೂನೆ.

| | | |
|---|---|---|
| 1. | ಹೋಟೆಲ್,ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಉದ್ಯಾನವನಗಳ ಮಾಲೀಕರ ಹೆಸರು. | |
| 2 | ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಉದ್ಯಾನವನಗಳ ಹೆಸರು. | |
| 3 | ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಉದ್ಯಾನವನಗಳ ಸಂಪೂರ್ಣ ವಿಳಾಸ/ ದೂರವಾಣಿ ಸಂಖ್ಯೆ. | |
| 4 | ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಉದ್ಯಾನವನಗಳು ಪ್ರವಾಸೋದ್ಯಮ ಇಲಾಖೆಯಲ್ಲಿ ನೋಂದಾವಣೆ ಆಗಿರುವ ಬಗ್ಗೆ ಮಾಹಿತಿ. | |
| 5 | 2021-22ನೇ ಹಣಕಾಸು ವರ್ಷದಲ್ಲಿ ಪಾವತಿಸಬೇಕಾದ ಆಸ್ತಿತೆರಿಗೆಯ ಮೊತ್ತ. | |
| 6 | 2021-22ನೇ ಹಣಕಾಸು ವರ್ಷದಲ್ಲಿ ಶೇ. 50ರಷ್ಟು ರಿಯಾಯಿತಿಯನ್ನು ನೀಡಲು ಕೋರುತ್ತಿರುವ ಆಸ್ತಿ ತೆರಿಗೆಯ ಮೊತ್ತ. | |

ಅರ್ಜಿದಾರರ ಸಹಿ/-

## ಸ್ವೀಕೃತಿ

2021-22ನೇ ಹಣಕಾಸು ವರ್ಷದಲ್ಲಿ ಹೋಟೆಲ್, ರೆಸಾರ್ಟ್, ರೆಸ್ಟೋರೆಂಟ್ ಮತ್ತು ಮನರಂಜನಾ ಉದ್ಯಾನವನಗಳ ಆಸ್ತಿ ತೆರಿಗೆಯಿಂದ ಶೇ 50ರಷ್ಟು ರಿಯಾಯಿತಿಯನ್ನು ನೀಡಲು ______________ ______________________________ ರವರಿಂದ ಅರ್ಜಿ ಸ್ವೀಕರಿಸಿದೆ.

ಸಹಿ

(ಲಕ್ಷ್ಮೀಸಾಗರ್ ಎನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ, ಬಿಬಿಎಂಪಿ

24/11/21

Scanned with CamScanner